ಆ) ಮೂಲಭೂತ ಸೌಕರ್ಯಗಳನ್ನು ತಕ್ಷಣ ಒದಗಿಸುವ ಪ್ರಸ್ತಾವನೆ ರಾಜ್ಯ ಸರ್ಕಾರದ ಮುಂದಿದೆಯೇ ;

ಇ) ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಹಾಕಿಕೊಂಡಿರುವ ಯೋಜನೆಗಳೇನು ?

ಶ್ರೀ ಡಿ.ಎಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)–.

ಅ) ಇಲ್ಲ

ಆ) ಇಲ್ಲ

ಇ) ಉದ್ಭವಿಸುವುದಿಲ್ಲ.

808 (1181): ಶ್ರೀ ಅಪ್ಪಸಾಹೇಬ್ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮತ್ತು ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ದೈಹಿಕ ಶಿಕ್ಷಣ ಬೋಧಿಸಲು ದೈಹಿಕ ಶಿಕ್ಷಕರ ಅವಶ್ಯಕತೆ ಇರುವುದು ಸರ್ಕಾರದ ಗಮನದಲ್ಲಿದೆಯೇ ;

ಆ) ಎಷ್ಟು ವರ್ಷಗಳಿಂದ ದೈಹಿಕ ಶಿಕ್ಷಕರ ನೇಮಕಾತಿ ಮಾಡಿಕೊಂಡಿರುವುದಿಲ್ಲ ;

ಇ) ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ;

ಈ) ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳನ್ನು ಯಾವಾಗ ನೇಮಕಾತಿ ಮಾಡಿಕೊಳ್ಳಲಾಗುವುದು; ಎಷ್ಟು ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳ ಲಾಗುವುದು ;

ಉ) ಅದಕ್ಕಾಗಿ ಸರ್ಕಾರವು ಹಾಕಿಕೊಂಡಿರುವ ಯೋಜನೆಗಳೇನು ?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)–

ಅ) ಸರ್ಕಾರಿ ಪ್ರೌಢಶಾಲೆಗಳಲ್ಲಿ ದೈಹಿಕ ಶಿಕ್ಷಣ ಬೋಧಿಸಲು ಶಿಕ್ಷಕರ ಅವಶ್ಯಕತೆ ಇದ್ದು ಅದಕ್ಕೆ ಸಂಬಂಧಿಸಿದಂತೆ ಪ್ರೌಢಶಾಲಾ ಶಿಕ್ಷಕರ ನೇಮಕಾತಿ ಮಾಡುವಾಗ ಇತರೆ ವಿಷಯದ ಶಿಕ್ಷಕರನ್ನು ನೇಮಕ ಮಾಡುವಂತೆ ದೈಹಿಕ

ಶಿಕ್ಷಕರ ಖಾಲಿ ಹುದ್ದೆಗಳ ಮಾಹಿತಿಯಂತೆ ನೇಮಕಾತಿಯಲ್ಲಿ 2005 ರವರೆಗೂ ಹುದ್ದೆ ಭರ್ತಿಮಾಡಲಾಗಿದೆ. ಇನ್ನು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) 2005–06ನೇ ಸಾಲಿನವರೆಗೂ ನೇಮಕಾತಿ ಪ್ರಕ್ರಿಯೆ ಪ್ರೌಢಶಾಲೆಗಳಲ್ಲಿ ನಡೆಯುತ್ತಿದ್ದು ಆ ಸಾಲಿನವರೆಗೂ ದೈಹಿಕ ಶಿಕ್ಷಕರ ಕೊರತೆಗನುಗುಣವಾಗಿ ನೇಮಕಾತಿ ಪ್ರಕ್ರಿಯೆ ನಡೆದಿದೆ. 1 ರಿಂದ 7ನೇ ತರಗತಿ ಇರುವ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿಗೆ ಪರಿಶೀಲಿಸಲಾಗುತ್ತಿದೆ.

ಇ) 2005–06ನೇ ಸಾಲಿನಿಂದ ಮಂಜೂರಾದ ಸರ್ಕಾರಿ ಪ್ರೌಢಶಾಲೆಗಳಿಗೆ ಮಾತ್ರ 27 ದೈಹಿಕ ಶಿಕ್ಷಕರ ಕೊರತೆ ಇರುತ್ತದೆ.

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಒಟ್ಟು 362 ದೈಹಿಕ ಶಿಕ್ಷಕರ ಹುದ್ದೆ ಖಾಲಿಯಿರುತ್ತವೆ.

ಈ) ಸರ್ಕಾರಿ ಪ್ರೌಢಶಾಲೆಗಳಲ್ಲಿನ ದೈಹಿಕ ಶಿಕ್ಷಕರ ಖಾಲಿ ಹುದ್ದೆಗಳನ್ನು ಹಾಗೂ ಪ್ರಾಥಮಿಕ ಶಾಲಾ ದೈಹಿಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

809(947): ಶ್ರೀ ಪಾಟೀಲ್ ಎ.ಬಿ. (ಸಂಕೇಶ್ವರ್): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಅನುದಾನಿತ ಕಾಲೇಜುಗಳಲ್ಲಿ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಈ ಮೂರು ವಿಭಾಗಗಳ ಉಪನ್ಯಾಸಕರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಹುದ್ದೆಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗುವುದು;

ಇ) ಕ್ರಮ ಕೈಗೊಳ್ಳದಿದ್ದರೆ ಯಾವಾಗ ಉಪನ್ಯಾಸಕರ ಹುದ್ದೆಗಳನ್ನು ತುಂಬಲಾಗುವುದು?

ಶ್ರೀ ಡಿ.ಎಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)–

ಅ) ಹೌದು